All India Radio: Bangalore
Regional Bulletin In Kannada
19.05.2025 / 2.30pm
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಮುಂಗಾರು ಪೂರ್ವ ಮಳೆಗೆ ರಾಜಧಾನಿ ಬೆಂಗಳೂರು ಅಸ್ತವ್ಯಸ್ತ - ಇನ್ನೂ ಎರಡು ದಿನ ಧಾರಾಕಾರ ಮಳೆ - ಹವಾಮಾನ ಇಲಾಖೆ ಮುನ್ಸೂಚನೆ
- ಬೆಂಗಳೂರಿನಲ್ಲಿ ಮಳೆ ಅನಾಹುತ ಪರಿಹಾರವಾಗಿ ತಕ್ಷಣವೇ ಒಂದು ಸಾವಿರ ಕೋಟಿ ರೂಪಾಯಿ ಬಿಡುಗಡೆಗೆ ಬಿಜೆಪಿ ಆಗ್ರಹ
- ಬಡ ಹಾಗೂ ಮಧ್ಯಮ ವರ್ಗದ ಜನರಿಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ಕೀಮೋಥೆರಪಿ ಸೌಲಭ್ಯ ಒದಗಿಸಲು ಸರ್ಕಾರ ನಿರ್ಧಾರ
- ನಾಳೆ ಹೊಸಪೇಟೆಯಲ್ಲಿ ಸರ್ಕಾರದ ಸಾಧನಾ ಸಮಾವೇಶ-ಕಂದಾಯ ಗ್ರಾಮ ಹಕ್ಕು ಪತ್ರ ವಿತರಣೆ

************

ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯದ ಕೆಲವು ಪ್ರದೇಶಗಳಲ್ಲಿ ಇಂದು ಮತ್ತು ನಾಳೆಯೂ ಭಾರಿ ಮಳೆಯಾಗುವ ಸಾಧ್ಯತೆಯಿದ್ದು, ಹಳದಿ ಆಲರ್ಟ್ ಘೋಷಿಸಲಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ಪ್ರಾದೇಶಿಕ ಕೇಂದ್ರದ ನಿರ್ದೇಶಕ ಎನ್ ಪುವಿಯರಸು ತಿಳಿಸಿದ್ದಾರೆ. ವಿಶೇಷವಾಗಿ ಕರಾವಳಿ ಭಾಗದಲ್ಲಿ ಭಾರಿ ಮಳೆಯಾಗಲಿದೆ. ಬೆಂಗಳೂರಿನಲ್ಲಿಯೂ ಮುಂದಿನ ಎರಡು ದಿನ ಭಾರಿ ಮಳೆಯಾಗುವ ನಿರೀಕ್ಷೆಯಿದೆ ಎಂದು ಹೇಳಿದ್ದಾರೆ. ರಾತ್ರಿ ಬೆಂಗಳೂರಿನಲ್ಲಿ ಸುರಿದ ಭಾರೀ ಮಳೆಯಿಂದಾಗಿ ತಗ್ಗು ಪ್ರದೇಶಗಳಿಗೆ ನೀರು ನುಗ್ಗಿ ಹಲವು ಬಡಾವಣೆಗಳು ಜಲಾವೃತವಾಗಿವೆ. ಭಾರಿ ಮಳೆಯಿಂದಾಗಿ ಕೆಲವು ಪ್ರದೇಶಗಳಲ್ಲಿ ತಾತ್ಕಾಲಿಕವಾಗಿ ವಿದ್ಯುತ್ ವ್ಯತ್ಯಯ ಉಂಟಾಗಬಹುದು. ಸಣ್ಣಪುಟ್ಟ ಸಂಚಾರ ದಟ್ಟಣೆ ಹಾಗೂ ಮರ, ರೆಂಬೆ, ಕೊಂಬೆಗಳು ಬೀಳುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ. ನಗರದ ವಿವಿಧೆಡೆ ರಸ್ತೆಗಳು ಜಲಾವೃತಗೊಂಡ ಪರಿಣಾಮ ಜನರು ತೀವ್ರ ತೊಂದರೆ ಅನುಭವಿಸಿದ್ದಾರೆ. ಮಾನ್ಯತಾ ಟೆಕ್ ಪಾರ್ಕ್ ಬಳಿಯೂ ವಾಹನ ಸಂಚಾರ ನಿಧಾನವಾಗಿದೆ. ಕಳೆದ ೨೪ ಗಂಟೆಗಳಲ್ಲಿ ಬೆಂಗಳೂರು ನಗರವೊಂದರಲ್ಲೇ ೧೦೩ ಮಿಲಿಮೀಟರ್ ಮಳೆಯಾಗಿದೆ. ಇದುವರೆಗೆ ಅತಿ ಹೆಚ್ಚು ಮಳೆ ಪೀಡಿತ ಪ್ರದೇಶಗಳಲ್ಲಿ ಬೆಂಗಳೂರು ಒಂದಾಗಿದೆ.

*****************

ಮುಂಗಾರು ಪೂರ್ವ ಮಳೆಗೆ ಬ್ರ್ಯಾಂಡ್ ಬೆಂಗಳೂರು ನರಕಮಯವಾಗಿದೆ ಎಂದು ಬಿಜೆಪಿ ಆರೋಪಿಸಿದೆ. ಸಾಮಾಜಿಕ ಜಾಲ ತಾಣದಲ್ಲಿ ಪೋಸ್ಟ್ ಮಾಡಿರುವ ಬಿಜೆಪಿ ಒಂದು ಸಣ್ಣ ಮಳೆಗೆ ರಾಜಧಾನಿಯ ರಸ್ತೆಗಳು ಜಲಾವೃತಗೊಂಡು ಕಾಲುವೆಗಳಂತಾಗಿವೆ. ಮಳೆ ನೀರನ್ನು ಸಮರ್ಪಕವಾಗಿ ಕಾಲುವೆಗೆ ಸೇರಿಸಲು ಕೈಲಾಗದ ಸರ್ಕಾರ ೨ ವರ್ಷದ ಸಾಧನೆ ಸಮಾವೇಶ ಮಾಡುತ್ತಿದೆ ಎಂದು ದೂರಿದೆ. ರಾಜಧಾನಿ ಬೆಂಗಳೂರಿನಲ್ಲಿ ಸಂಭವಿಸಿರುವ ಮಳೆ ಅನಾಹುತ ಪರಿಹಾರ

ಕಾರ್ಯಕ್ಕೆ ತಕ್ಷಣ ಒಂದು ಸಾವಿರ ಕೋಟಿ ರೂಪಾಯಿ ಬಿಡುಗಡೆ ಮಾಡಬೇಕು ಎಂದು ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್. ಅಶೋಕ ಸರ್ಕಾರವನ್ನು ಆಗ್ರಹಿಸಿದ್ದಾರೆ. ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಅವರು, ಮುಂಗಾರು ಪೂರ್ವದ ಒಂದೇ ಒಂದು ಮಳೆ ಕಾಂಗ್ರೆಸ್ ಸರ್ಕಾರದ "ಬ್ರಾಂಡ್ ಬೆಂಗಳೂರು"ನ ನಿಜ ಬಣ್ಣ ಬಯಲು ಮಾಡಿದೆ. ಇಂತಹ ಸನ್ನಿವೇಶದಲ್ಲಿ ಸಂತ್ರಸ್ತರ ನೆರವಿಗೆ ಧಾವಿಸಬೇಕಿದ್ದ ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪಮುಖ್ಯಮಂತ್ರಿ ಸಚಿವರು ಸಾಧನಾ ಸಮಾವೇಶದ ಗುಂಗಿನಲ್ಲಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

***********

ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಕಳೆದ ಒಂದು ವಾರದಿಂದ ನಿರಂತರ ಮಳೆಯಾಗುತ್ತಿದೆ. ಜಿಲ್ಲೆಯ ಚಿಕ್ಕಮಗಳೂರು, ಮೂಡಿಗೆರೆ, ಕೊಪ್ಪ, ಶೃಂಗೇರಿ ತಾಲೂಕುಗಳಲ್ಲಿ ಹೆಚ್ಚಿನ ಮಳೆಯಾಗುತ್ತಿದೆ. ಚಿಕ್ಕಮಗಳೂರಿನ ಅಲ್ಲಂಪುರ ಬಳಿ ಲ ಕ್ಕೂ ಹೆಚ್ಚು ವಿದ್ಯುತ್ ಕಂಬಗಳಿಗೆ ಹಾನಿಯುಂಟಾಗಿದೆ. ಮುಂಗಾರು ಪೂರ್ವ ಮಳೆ ಹಿನ್ನೆಲೆಯಲ್ಲಿ ಮಳೆಯಿಂದ ಉಂಟಾಗುವ ಹಾನಿಯನ್ನು ಎದುರಿಸಲು ಜಿಲ್ಲಾಡಳಿತ ಸಕಲ ಸಿದ್ಧತೆ ಕೈಗೊಂಡಿದೆ. ಎಂದು ಜಿಲ್ಲಾಧಿಕಾರಿ ಮೀನಾ ನಾಗರಾಜ್ ತಿಳಿಸಿದ್ದಾರೆ.

***********

ಕೋಲಾರ ಜಿಲ್ಲೆಯಲ್ಲಿ ನಾಲ್ಕೈದು ದಿನಗಳಿಂದ ನಿರಂತರ ಮಳೆಯಾಗುತ್ತಿದ್ದು, ಮಾವು, ಟೊಮೆಟೊ ಸೇರಿದಂತೆ ತರಕಾರಿ ಬೆಳೆಗಳಿಗೆ ತೇವಾಂಶ ಹೆಚ್ಚಾಗುವ ಸಾಧ್ಯತೆ ಇದೆ. ಟೊಮೆಟೊ ಬೆಳೆಗೆ ವೈರಸ್ ಹರಡುವ ಸಾಧ್ಯತೆ ಇರುವುದರಿಂದ ರೈತರು ಆತಂಕಕ್ಕೆ ಒಳಗಾಗಿದ್ದಾರೆ. ವಾರ್ಷಿಕ ಬೆಳೆಯಾದ ಮಾವು ಇನ್ನೇನು ಒಂದು ವಾರದಲ್ಲಿ ಮಾರುಕಟ್ಟೆ ಪ್ರವೇಶ ಮಾಡಲಿದೆ. ಆಕಾಶವಾಣಿಯೊಂದಿಗೆ ಮಾತನಾಡಿದ ಕೋಲಾರ ಜಿಲ್ಲೆಯ ಕೊಂಡೇನಹಳ್ಳಿ ಗ್ರಾಮದ ರೈತ ಪ್ರಸನ್ನಕುಮಾರ್ ಮಳೆಯ ಜೊತೆಗೆ ಬಿರುಗಾಳಿಯು ಬೀಸುತ್ತಿರುವುದರಿಂದ ಮಾವಿನ ಕಾಯಿಗಳು ಕೆಲವೆಡೆ ನೆಲಕಚ್ಚಿವೆ ಎಂದು ತಿಳಿಸಿದ್ದಾರೆ.

ಧ್ವನಿ- ರೈತ ಪ್ರಸನ್ನಕುಮಾರ್ (೩೫ ಸೆಕೆಂಡ್ಸ್)

***********

ಬಡ, ಮಧ್ಯಮ ವರ್ಗದ ಜನರಿಗಾಗಿ ಸರ್ಕಾರಿ ಆಸ್ಪತ್ರೆಗಳಲ್ಲೂ ಕ್ಯಾನ್ಸರ್ ರೋಗಿಗಳಿಗೆ ಕೀಮೋಥೆರಪಿ ಸೌಲಭ್ಯ ಒದಗಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಬೆಂಗಳೂರಿನಲ್ಲಿ ನಿನ್ನೆ ಮಾಹಿತಿ ನೀಡಿರುವ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಇದೇ ೨೩ ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮೈಸೂರಿನಲ್ಲಿ ಚಾಲನೆ ನೀಡಲಿದ್ದಾರೆಂದು ಎಂದು ತಿಳಿಸಿದ್ದಾರೆ. ಬಳಿಕ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಸರ್ಕಾರ ಡೇ ಕೇರ್ ಕಿಮೊಥೆರಪಿ ಕೇಂದ್ರಗಳನ್ನು ತೆರೆಯಲಿದೆ. ಕ್ಯಾನ್ಸರ್ ಚಿಕಿತ್ಸೆಯನ್ನು ಜನರಿಗೆ ಹತ್ತಿರ ತರುವ ಗುರಿಯನ್ನು ಈ ಕೇಂದ್ರಗಳು ಹೊಂದಿವೆ ಎಂದು ಅವರು ಹೇಳಿದ್ದಾರೆ. ಕ್ಯಾನ್ಸರ್‌ನಿಂದ ಬಳಲುವ ರೋಗಿಗಳು ತಮ್ಮ ಚಿಕಿತ್ಸೆಗೆ ಲಕ್ಷಾಂತರ ರೂಪಾಯಿ ವ್ಯಯಿಸುವುದು ಅನಿವಾರ್ಯವಾಗಿದೆ. ಸರ್ಕಾರಿ ಆಸ್ಪತ್ರೆಯಲ್ಲೂ ಈ ಸೌಲಭ್ಯ ಒದಗಿಸಿದರೆ ಬಡವರಿಗೆ ನೆರವಾಗಲಿದೆ ಎಂದು ಅವರು ತಿಳಿಸಿದ್ದಾರೆ.

***********

ನಾಳೆ ರಾಜ್ಯ ಸರ್ಕಾರ ಎರಡು ವರ್ಷ ಪೂರೈಸುತ್ತಿರುವ ಹಿನ್ನೆಲೆಯಲ್ಲಿ ವಿಜಯನಗರದ ಹೊಸಪೇಟೆಯಲ್ಲಿ ಸಮರ್ಪಣೆ ಸಂಕಲ್ಪ ಸಮಾವೇಶ ನಡೆಯಲಿದೆ. ಕೇಂದ್ರದ ಕಾಂಗ್ರೆಸ್ ನಾಯಕರು, ಮುಖ್ಯಮಂತ್ರಿ ಸಿದ್ಧರಾಮಯ್ಯ ಸೇರಿದಂತೆ ಅನೇಕ ಗಣ್ಯರು ಸಮಾರಂಭದಲ್ಲಿ ಪಾಲ್ಗೊಳ್ಳುತ್ತಿರುವುದರಿಂದ ನಗರದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸ್ ಬಿಗಿಬಂದೋ ಬಸ್ತ್ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿಎಲ್ ಶ್ರೀಹರಿ ಬಾಬು ತಿಳಿಸಿದ್ದಾರೆ. ಸಮಾವೇಶದಲ್ಲಿ ಸರ್ಕಾರ ಒಂದು ಲಕ್ಷದ ಹನ್ನೊಂದು ಸಾವಿರದ ನೂರ ಹನ್ನೊಂದು ಕಂದಾಯ ಗ್ರಾಮ ಹಕ್ಕು ಪತ್ರಗಳನ್ನು ವಿತರಿಸಲಿದೆ.

***********

ಛತ್ತೀಸ್‌ಗಡ ಹೈಕೋರ್ಟ್ ನಿವೃತ್ತ ಮುಖ್ಯ ನ್ಯಾಯಮೂರ್ತಿ ಹಾಗೂ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರು ಹಾಗೂ ಕಾನೂನು ಆಯೋಗದ ಮಾಜಿ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದ ನಿವೃತ್ತ ನ್ಯಾಯಮೂರ್ತಿ ಎಸ್.ಆರ್.ನಾಯಕ್ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿನ್ನೆ ನಿಧನ ಹೊಂದಿದ್ದಾರೆ. ಎಸ್.ಆರ್.ನಾಯಕ್ ಅವರಿಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ. ಇಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಪಾರ್ಥೀವ ಶರೀರದ ಅಂತಿಮ ದರ್ಶನ ಪಡೆದರು.

***********

ಯಾದಗಿರಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಇಲಾಖೆ, ಆರೋಗ್ಯ ಇಲಾಖೆ, ಸೇರಿದಂತೆ ಹಲವು ತಂಡಗಳಿಂದ ಯುದ್ಧದ ಅಣಕು ಪ್ರದರ್ಶನ ನಡೆಯಿತು. ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಮಾತನಾಡಿ, ಯುದ್ಧದಂತಹ ಸಂದರ್ಭ ಎದುರಿಸಲು, ಭಯೋತ್ಪಾದಕರ ದಾಳಿ ನಿಯಂತ್ರಣ ಹಾಗೂ ದಾಳಿ ನಂತರ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸುವಲ್ಲಿ ಅಣಕು ಪ್ರದರ್ಶನ ಯಶಸ್ವಿಯಾಗಿದೆ ಎಂದು ತಿಳಿಸಿದ್ದಾರೆ.

***********

ಭತ್ತಕ್ಕೆ ಕನಿಷ್ಟ ಬೆಂಬಲ ಬೆಲೆ ಕಾಯಿದೆ ಜಾರಿಗೆ ತರಬೇಕು ಮತ್ತು ಪ್ರಸ್ತುತ ೩ ಸಾವಿರದ ೫೦೦ ರೂ ದರದಲ್ಲಿ ಭತ್ತ ಖರೀದಿ ಮಾಡಬೇಕೆಂದು ಆಗ್ರಹಿಸಿ ದಾವಣಗೆರೆಯಲ್ಲಿಂದು ರಾಷ್ಟ್ರೀಯ ಹೆದ್ದಾರಿ ತಡೆ ನಡೆಸಿದ ೧೫೦ ಕ್ಕೂ ಅಧಿಕ ರೈತರನ್ನು ಬಂಧಿಸಲಾಗಿದೆ. ದಾವಣಗೆರೆ ಹೊರ ವಲಯದ ಬಾಡಾ ತಿರುವಿನಲ್ಲಿ ಹೆದ್ದಾರಿ ತಡೆ ಮಾಡಿದ ಪರಿಣಾಮ ಪುಣೆ-ಬೆಂಗಳೂರು ಮಧ್ಯೆ ವಾಹನ ಸಂಚಾರ ಸ್ಥಗಿತಗೊಂಡಿತ್ತು. ನಂತರ ಪೊಲೀಸರು ಎಲ್ಲ ಪ್ರತಿಭಟನಾಕಾರರನ್ನು ಬಂಧಿಸಿ ವಾಹನ ಸಂಚಾರಕ್ಕೆ ಅನುವು ಮಾಡಿಕೊಟ್ಟರು.

***********

ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ ನಾಳೆ ಆಯೋಜಿಸಿರುವ ಸಾಧನಾ ಸಮಾವೇಶ ಹಿನ್ನೆಲೆಯಲ್ಲಿ ವಿಜಯಪುರ ಜಿಲ್ಲೆಯಾದ್ಯಂತ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಬಸ್ಸುಗಳ ಕಾರ್ಯಾಚರಣೆಯಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿ ನಾರಾಯಣಪ್ಪ ಕುರುಬರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸಾರ್ವಜನಿಕರು ಸಹಕರಿಸುವಂತೆ ಅವರು ಮನವಿ ಮಾಡಿದ್ದಾರೆ.

***********

ಗದಗ ಜಿಲ್ಲೆಯ ಹುಲಕೋಟಿ ಗ್ರಾಮದ ಕೃಷಿ ವಿಜ್ಞಾನ ಕೇಂದ್ರದಲ್ಲಿ "ವಿಕಸಿತ ಕೃಷಿ ಸಂಕಲ್ಪ ಅಭಿಯಾನದ ಅಂಗವಾಗಿ ಮುಂಗಾರು ಪೂರ್ವ ಸಿದ್ಧತಾ ತರಬೇತಿ ಶಿಬಿರ ಜರುಗಿತು. ಗದಗ ಜಿಲ್ಲಾ ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಜಿ.ಎಚ್ ಶಿಬಿರಕ್ಕೆ ಚಾಲನೆ ನೀಡಿದರು. ಗದಗ ಜಿಲ್ಲೆಯಲ್ಲಿ ಮುಂಗಾರು ಬಿತ್ತನೆ ಪೂರ್ವದಲ್ಲಿ ಕೈಗೊಳ್ಳಬೇಕಾದ ಮಣ್ಣು ಪರೀಕ್ಷೆ, ಭೂಮಿ ಸಿದ್ಧತೆ, ಬೀಜೋಪಚಾರ, ಬೀಜ ಮತ್ತು ಗೊಬ್ಬರಗಳ ಆಯ್ಕೆ, ನೈಸರ್ಗಿಕ ಕೃಷಿ, ತೋಟಗಾರಿಕೆ ಬೆಳೆಗಳು, ಕೃಷಿ ಯಾಂತ್ರೀಕರಣ ಇತ್ಯಾದಿ ವಿಷಯಗಳ ಕುರಿತು ರೈತರಿಗೆ ತರಬೇತಿ ನೀಡುವುದು ಉತ್ತಮ ಕಾರ್ಯವಾಗಿದೆ ಎಂದು ಹೇಳಿದರು. ಕೃಷಿ ವಿಜ್ಞಾನಿಗಳ ಸಹಾಯದಿಂದ ರೈತರು ಉಪಯುಕ್ತ ತಾಂತ್ರಿಕ ಮಾಹಿತಿ ಪಡೆದು ಹೆಚ್ಚಿನ ಲಾಭ ಪಡೆಯಬೇಕು ಎಂದು ಕರೆ ನೀಡಿದ್ದಾರೆ.

***********

ಸಂಕ್ಷಿಪ್ತ ಸುದ್ದಿ

೧. ಪರಿಶಿಷ್ಟ ಜಾತಿ ಸಮೀಕ್ಷೆ ಅವಧಿ ಇದೇ ೨೫ರವರೆಗೆ ವಿಸ್ತರಿಸಲಾಗಿದೆ ಎಂದು ಯಾದಗಿರಿ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಚನ್ನಬಸಪ್ಪ ತಿಳಿಸಿದ್ದಾರೆ. ಮನೆ ಮನೆ ಸಮೀಕ್ಷೆಯಲ್ಲಿ ಒಂದು ವೇಳೆ ಕೈಬಿಟ್ಟು ಹೋದಂತಹ ಪರಿಶಿಷ್ಟ ಜಾತಿಯ ಕುಟುಂಬದವರು ಶಿಬಿರಕ್ಕೆ ಆಗಮಿಸಿದಾಗ ಸುಸೂತ್ರವಾಗಿ ಸಮೀಕ್ಷೆ ನಡೆಸಲು ಕ್ರಮವಹಿಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.೨. ಯಾದಗಿರಿ ನಗರದ ಪತ್ರಿಕಾ ಭವನದಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಆಯೋಜಿಸಿದ್ದ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಪಾಸಾದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಸನ್ಮಾನ ಕಾರ್ಯಕ್ರಮ ನಡೆಯಿತು. ೩. ರಾಮನಗರ ಜಿಲ್ಲಾಡಳಿತದ ವತಿಯಿಂದ ಹಾರೋಹಳ್ಳಿ ಟೌನ್‌ನಲ್ಲಿರುವ ಕೆಪಿಎಸ್ ಮಾದರಿ ಪ್ರಾಥಮಿಕ ಪಾಠಶಾಲೆಯ ಆವರಣದಲ್ಲಿ ಆಯೋಜಿಸಲಾಗಿದ್ದು ಜನತಾ ದರ್ಶನ ಕಾರ್ಯಕ್ರಮವನ್ನು ರಾಮನಗರ ವಿಧಾನಸಭಾ ಕ್ಷೇತ್ರದ ಶಾಸಕ ಎಚ್.ಎ. ಇಕ್ಬಾಲ್ ಹುಸೇನ್ ಉದ್ಘಾಟಿಸಿದರು.

****END*****